ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ

1444(1691); ಶ್ರೀ ಕೋನರೆಡ್ಡಿ ಎನ್.ಎಚ್.,

ಅ) 1994–95ನೇ ಸಾಲಿನಲ್ಲಿ ಪ್ರಾರಂಭಿಸಲಾದ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನ ನೀಡುವ ಅವಧಿಯನ್ನು ಮುಂದುವರೆಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, 1994–95ನೇ ಸಾಲಿನಲ್ಲಿ ಪ್ರಾರಂಭವಾದ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೊಳಪಡಿಸಿ, ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು (ವಿವರಗಳನ್ನು ನೀಡುವುದು);

ಇ) ಇದುವರೆವಿಗೂ ಸರ್ಕಾರ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಿ ಅನುದಾನವನ್ನು ಬಿಡುಗಡೆ ಮಾಡಿದೆ (ವಿವರಗಳನ್ನು ನೀಡುವುದು);

ಈ) 1995ರಿಂದ 2008ರವರೆಗಿನ ಎಲ್ಲಾ ಖಾಸಗಿ ಶಿಕ್ಷಣ ಸಂಸ್ಥೆಗಲಿಗೆ ವಿದ್ಯಾರ್ಥಿಗಳ ಪ್ರಗತಿಯನ್ನಾಧರಿಸಿ ಆಯವ್ಯಯದಲ್ಲಿ ಅನುದಾನ ಬಿಡುಗಡೆ ಮಾಡುವುದಾಗಿ ಸರ್ಕಾರ ಘೋಷಣೆ ಮಾಡಿದೆಯೇ;

ಉ) ಹಾಗಿದ್ದಲ್ಲಿ, ಇದುವರೆವಿಗೂ ಎಷ್ಟು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿದೆ (ವಿವರಗಳನ್ನು ನೀಡುವುದು);

ಊ) ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಮತ್ತು ಪದವಿ ಪೂರ್ವ ಇಲಾಖೆಯಲ್ಲಿ ವೇತನಾನುದಾನಕ್ಕೆ ಒಳಪಡದೇ ಇರುವ ಬಾಕಿ ಉಳಿದಿರುವ ಉಳಿಕೆ ಶಿಕ್ಷಕರ ಹೆಸರು ಹಾಗೂ ಸಂಸ್ಥೆಯ ಹೆಸರು ಸಹಿತ ಸಂಪೂರ್ಣ ವಿವರಗಳನ್ನು ನೀಡುವುದು;

ಋ) ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಬಹಳ ದಿನಗಳಿಂದ ಖಾಲಿ ಇರುವ ಶಿಕ್ಷಕೇತರ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರನ್ನು ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕಿಮ್ಮನೆ ರತ್ನಾಕರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ಇ) ಅನ್ವಯಿಸುವುದಿಲ್ಲ.

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ಋ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಖಾಲಿ ಇರುವ ಶಿಕ್ಷಕೇತರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಮಿತವ್ಯಯ ಜಾರಿಯಲ್ಲಿರುತ್ತದೆ. ಆದ್ದರಿಂದ ಭರ್ತಿಗೆ ಕ್ರಮವಹಿಸಲಾಗುತ್ತಿಲ್ಲ.